ಸದನವು ಸಂಜೆ 6 ಗಂಟೆ 25 ನಿಮಿಷಕ್ಕೆ ಪುನಃ ಸಮಾವೇಶಗೊಂಡಿತು
ಸನ್ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣ) ಅಧ್ಯಕ್ಷ ಪೀಠದಲ್ಲಿದ್ದರು

4. ಪ್ರಕಟಣೆ

ಅಧ್ಯಕ್ಷರು : ಈಗ ಒಂದು ಪ್ರಕಟಣೆ.

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಕೆಳಕಂಡ ಸಂದೇಶವು ಬಂದಿರುತ್ತದೆ:

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು ಈ ದಿನ, ದಿನಾಂಕ 29.03.2006ರಂದು ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆಯೆಂದು ತಿಳಿಸಿರುತ್ತಾರೆ.

1. ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2006

2. ಕರ್ನಾಟಕ ಮೋಟಾರು ವಾಹನಗಳ ತೆರಿಗೆ(ತಿದ್ದುಪಡಿ)ವಿಧೇಯಕ,2006

3. ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ, 2006

4. ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2006

5. ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2006

ಈಗ ಸದನವನ್ನು ಸೋಮವಾರ ಬೆಳಿಗ್ಗೆ 11 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 6 ಗಂಟೆ 26 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 3ನೇ ಏಪ್ರಿಲ್ 2006ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು).